15

# ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್/ಉಪಲೋಕ್/ಬಿಡಿ.2817/2015/ಸನಿಕಾಸ–2

ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಭೇಡ್ಕರ್ ವೀಧಿ,
ಬೆಂಗಳೂರು,ದಿನಾಂಕ: 10.4.2017

## ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(1)ರ ಅನ್ವಯ ವರದಿ

**ವಿಷಯ:** ದೇವನಹಳ್ಳಿ ಪಟ್ಟಣದ 301,302,340,347 ಇವುಗಳ ಮಧ್ಯೆ ಇರುವ ಸರ್ಕಾರಿ ಹಳ್ಳ ಹಾಗೂ ರಾಜಕಾಲುವೆಯನ್ನು ಒತ್ತುವರಿದಾರರಿಂದ ತೆರವುಗೊಳಿಸಿ ಮಳೆ ನೀರು ಹಾಗೂ ಇತರ ನೀರು ಸರಾಗವಾಗಿ ಹರಿದುಹೋಗಲು ಅನುಕೂಲ ಮಾಡಲು ಸೂಕ್ತ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟವರಿಗೆ ನಿರ್ದೇಶನ ನೀಡಲು ಕೋರಿ.

*******

ಶ್ರೀ ಎನ್. ನರಸಿಂಹಯ್ಯ, ಸೂಳಿಬೆಲೆ ಮುಖ್ಯ ರಸ್ತೆ, ದೇವನಹಳ್ಳಿಯ ನಿವಾಸಿ, (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ (1) ತಹಶೀಲ್ದಾರ್, ದೇವನಹಳ್ಳಿ ತಾಲ್ಲೂಕು, (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:–**

ದೂರುದಾರರು ತಮ್ಮ ದೂರಿನಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯ ವ್ಯಾಪ್ತಿಯಲ್ಲಿರುವ ಸರ್ವೆ ನಂಬರ್ 301,302,340,347, ಇವುಗಳ ಮಧ್ಯೆ ಇರುವ ಸರ್ಕಾರಿ ಹಳ್ಳ ಹಾಗೂ ರಾಜಕಾಲುವೆಯನ್ನು ಶ್ರೀ ಅಶ್ವತ್ಥನಾರಾಯಣ ಅವರು ಒತ್ತುವರಿ ಮಾಡಿಕೊಂಡು ಮನೆ ಹಾಗೂ ಕಾಂಪೌಂಡ್ ನಿರ್ಮಿಸಿರುತ್ತಾರೆ. ಇದರಿಂದ ರಾಜಕಾಲುವೆಯಲ್ಲಿ ನೀರು ಹರಿಯುವುದು ನಿಂತು ರಾಷ್ಟೀಯ ಹೆದ್ದಾರಿ 207ರಲ್ಲಿ ಮಳೆ ಬಂದಾಗ ನೀರು ಅದರ ಮೇಲೆ ಹರಿಯುತ್ತದೆ. ಇದರಿಂದ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗಿರುತ್ತದೆ. ಸರ್ವೆ ನಂ.340ರ ಹಿಡುವಳಿದಾರರು ಸುಮಾರು 20–30 ಗುಂಟೆ ಜಮೀನು ಒತ್ತುವರಿ ಮಾಡಿರುತ್ತಾರೆ. ಆದರೆ ಸ್ಕೆಚ್ ನಲ್ಲಿ $2^{1/2}$ ಗುಂಟೆ ತೋರಿಸಿರುತ್ತಾರೆ. ಸ.ನಂ.301ರ ಹಿಡುವಳಿದಾರರಾದ ಶ್ರೀ ನರಸಿಂಹಮೂರ್ತಿ ಹಾಗೂ ಸಿ.ಅಶ್ವತ್ಥನಾರಾಯಣ ಅವರ ಮಧ್ಯೆ ಸಿವಿಲ್

16

ನ್ಯಾಯಾಲಯದಲ್ಲಿ ಈ ರಾಜಕಾಲುವೆ ಮುಚ್ಚಿದ ಬಗ್ಗೆ ದಾವೆ ಚಾಲ್ತಿಯಲ್ಲಿರುತ್ತದೆ. ಆದ್ದರಿಂದ ಈ ಬಗ್ಗೆ ತನಿಖೆ ಮಾಡಿ ಎದುರುದಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ದೂರು ಸಲ್ಲಿಸಿದ್ದಾರೆ.

3. ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ದೂರುದಾರರ ಸಹ ರಾಜಕಾಲುವೆ ಒತ್ತುವರಿ ಮಾಡಿಕೊಂಡು ಮನೆ ನಿರ್ಮಿಸುತ್ತಿದ್ದಾರೆ. ಅದೇ ರೀತಿ ಇತರೆ ಜನರು ಒತ್ತುವರಿ ಮಾಡಿಕೊಂಡಿದ್ದು, ಅದನ್ನು ತೆರವುಗೊಳಿಸುವಂತೆ ದಿ. 3.9.2015ರಂದು ನೋಟೀಸು ನೀಡಲಾಗಿರುತ್ತದೆ. ದಿ.5.10.2015ರಂದು ಕಛೇರಿ ಆದೇಶ ಹೊರಡಿಸಿ ಒತ್ತುವರಿಯನ್ನು ತೆರವುಗೊಳಿಸಿ, ತಪ್ಪಿದಲ್ಲಿ ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ಕಲಂ.192(ಎ) ಪ್ರಕಾರ ಕ್ರಿಮಿನಲ್ ಮೊಕದ್ದಮೆ ದಾಖಲಿಸುವಂತೆ ಕಸಬಾ ಹೋಬಳಿ ರಾಜಸ್ವ ನಿರೀಕ್ಷಕರಿಗೆ ಆದೇಶಿಸಲಾಗಿದೆ. ತಾತ್ಕಾಲಿಕವಾಗಿ ರಾಜ ಕಾಲುವೆ ತೆರವುಗೊಳಿಸಿ ಮಳೆ ನೀರು ಹರಿದುಹೋಗುವಂತೆ ಮಾಡಲಾಗಿದೆ. ಆದ್ದರಿಂದ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ.

4. ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ದೂರಿನಲ್ಲಿನ ಅಂಶಗಳನ್ನು ಪುನರುಚ್ಚರಿಸಿದ್ದಾರೆ.

5. ದೂರುದಾರರು ಹಾಜರುಪಡಿಸಿದ ದೂರು ಮತ್ತು ದಾಖಲಾತಿಗಳು, ಆಕ್ಷೇಪಣೆ ಮತ್ತು ದಾಖಲಾತಿಗಳು, ಮತ್ತು ಪ್ರತ್ಯುತ್ತರ ಮತ್ತು ದಾಖಲಾತಿಗಳನ್ನು ಪರಿಶೀಲಿಸಿದಾಗ, ದೇವನಹಳ್ಳಿ ಪಟ್ಟಣದ ವ್ಯಾಪ್ತಿಯಲ್ಲಿರುವ ಸರ್ವೆ ನಂಬರ್ 301,302,340,347 ಇವುಗಳ ಮಧ್ಯೆ ಇರುವ ಸರ್ಕಾರಿ ಹಳ್ಳ ಹಾಗೂ ರಾಜಕಾಲುವೆಯನ್ನು ದೂರುದಾರರು ಸೇರಿದಂತೆ ಅನೇಕರು ಒತ್ತುವರಿ ಮಾಡಿಕೊಂಡಿದ್ದಾರೆನ್ನುವುದನ್ನು ಎದುರುದಾರರು ಒಪ್ಪಿಕೊಂಡಿರುತ್ತಾರೆ. ಈ ಒತ್ತುವರಿ ತೆರವುಗೊಳಿಸಲು ಎದುರುದಾರರು ತಕ್ಕ ಮಟ್ಟಿಗೆ ಕ್ರಮಕೈಗೊಂಡಿದ್ದು, ಆದರೆ ಅದರಲ್ಲಿ ಯಾವುದೇ ಪ್ರಗತಿ ಆಗಿರುವುದಿಲ್ಲ. ಆದ್ದರಿಂದ ಈ ಮೇಲ್ಕಾಣಿಸಿದ ಜಮೀನುಗಳ ಮಧ್ಯೆ ಹರಿದುಹೋಗಿರುವ ರಾಜಕಾಲುವೆಯನ್ನು ಒತ್ತುವರಿದಾರರಿಂದ ತೆರವುಗೊಳಿಸುವುದು ಅತಿ ಅಗತ್ಯವಾಗಿರುತ್ತದೆ. ಎದುರುದಾರರು ಈ ಹಂತದಲ್ಲಿ ರಾಜಕಾಲುವೆ ತೆರವುಗೊಳಿಸಲು ನೋಟೀಸು ನೀಡಿದಾಗ ಒತ್ತುವರಿದಾರರು ಯಾವುದೇ ಪ್ರತಿಕ್ರಿಯೆ ನೀಡಿರುವುದಿಲ್ಲ.

6. ಆದ್ದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(1) ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ, ದೇವನಹಳ್ಳಿ ಪಟ್ಟಣದ 301,302,340,347 ಇವುಗಳ ಮಧ್ಯೆ ಇರುವ ಸರ್ಕಾರಿ ಹಳ್ಳ ಹಾಗೂ ರಾಜಕಾಲುವೆಯನ್ನು ಒತ್ತುವರಿದಾರರಿಂದ ತೆರವುಗೊಳಿಸಿ ಮಳೆ ನೀರು ಹಾಗೂ ಇತರ ನೀರು

17

ಸರಾಗವಾಗಿ ಹರಿದುಹೋಗಲು ಅನುಕೂಲ ಮಾಡಲು ಸೂಕ್ತ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟವರಿಗೆ ನಿರ್ದೇಶನ ನೀಡಲು ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.

7. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(2)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಒಂದು ತಿಂಗಳೊಳಗೆ ವರದಿ ಸಲ್ಲಿಸಲು ಕೋರಲಾಗಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

Sd/- 11/4/17

[ ನ್ಯಾಯಮೂರ್ತಿ ಸುಭಾಷ್ ಬಿ ಆಡಿ]
ಉಪಲೋಕಾಯುಕ್ತರು,
ಕರ್ನಾಟಕ ರಾಜ್ಯ.